JUNE 06, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಕೇಂದ್ರ ಸರ್ಕಾರ, ರಾಯಚೂರು ಸೇರಿದಂತೆ ರಾಜ್ಯದ ವಿವಿಧೆಡೆಗಳಲ್ಲಿ ಬೆಳೆಯುವ ಒಣ ಮೆಣಸಿಕಾಯಿಯನ್ನು ಬೆಂಬಲ ಬೆಲೆ ಯೋಜನೆಯಡಿ ಖರೀದಿಸುವಂತೆ ಅಧಿಸೂಚನೆ ಹೊರಡಿಸಿದೆ. ಪ್ರತಿ ಕ್ವಿಂಟಲ್‌ಗೆ 10 ಸಾವಿರದ 589 ರೂಪಾಯಿಗಳಂತೆ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಭಾರಿ ಪ್ರಮಾಣದಲ್ಲಿ ಬೆಳೆಯಲಾಗಿದ್ದ ಒಣಮೆಣಸಿನಕಾಯಿ ಬೆಲೆ ಕುಸಿತದ ಹಿನ್ನೆಲೆಯಲ್ಲಿ, ರಾಯಚೂರು ಸಂಸದ ಜಿ. ಕುಮಾರ ನಾಯಕ ಹಾಗೂ ಎಂಪಿಎಂಸಿ ಖಾತೆ ಸಚಿವ ಶಿವಾನಂದ ಪಾಟೀಲ್ ಅವರು ಬೆಂಬಲ ಬೆಲೆಗೆ ಆಗ್ರಹಿಸಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುಂಟೂರು ತಳಿ, ಒಣ ಮೆಣಸಿನಕಾಯಿಗೆ, ಬೆಂಬಲ ಬೆಲೆ ನೀಡುವಂತೆ ಆಗ್ರಹಿಸಿ ಕೇಂದ್ರ ಸರ್ಕಾರಕ್ಕೆ ಪತ್ರವನ್ನು ಬರೆದಿದ್ದರು.

<><><>

ಗದಗ ಜಿಲ್ಲೆ, ನರಗುಂದ ತಾಲೂಕಿನ ಜಗಾಪೂರ, ಅರಿಶಿನಗೋಡಿ, ವಾಸನ, ಕೊಣ್ಣೂರ ಹಾಗೂ ಕಪ್ಪಲಿ ಗ್ರಾಮಗಳಲ್ಲಿ, ವಿಕಸಿತ ಕೃಷಿ ಸಂಕಲ್ಪ ರಾಷ್ಟ್ರೀಯ ಅಭಿಯಾನ ಕಾರ್ಯಕ್ರಮ ಜರುಗಿತು. ಹುಲಕೋಟಿ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾದ ಕೃಷಿ ಸಂಕಲ್ಪ ಅಭಿಯಾನದಲ್ಲಿ ರೈತರಿಗೆ ಬೀಜೋಪಚಾರ, ಸಿರಿಧಾನ್ಯ ಹಾಗೂ ಅವುಗಳ ಮಹತ್ವ, ಕೃಷಿ ಯಂತ್ರೋಪಕರಣಗಳ ಬಳಕೆ, ಸಮಗ್ರ ಕೃಷಿ ಪದ್ಧತಿಗಳ ಬಗ್ಗೆ ಮಾಹಿತಿ ಹಾಗೂ ತರಬೇತಿ ನೀಡಲಾಯಿತು. ವಿಕಸಿತ ಕೃಷಿ ಸಂಕಲ್ಪ ರಾಷ್ಟ್ರೀಯ ಅಭಿಯಾನ ಕುರಿತು ಗದಗ ಜಿಲ್ಲೆ, ಜಗಾಪೂರ ಗ್ರಾಮದ ಪ್ರಗತಿಪರ ರೈತ, ಗೋವಿಂದ ರೆಡ್ಡಿ ಸಿದ್ನಾಳ ಅವರು ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಬೈಟ್ : ಗೋವಿಂದ ರೆಡ್ಡಿ ಸಿದ್ನಾಳ 36 ಸೆಕೆಂದುಗಳು

<><><>

ಕೊಪ್ಪಳ ಜಿಲ್ಲೆ, ಹಿರೇಸಿಂಧೋಗಿ ಗ್ರಾಮದಲ್ಲಿ ಜರುಗಿದ ಕೃಷಿ ಸಂಕಲ್ಪ ರಾಷ್ಟ್ರೀಯ ಅಭಿಯಾನದಲ್ಲಿ, ಕೃಷಿ ವಿಜ್ಞಾನಿಗಳು ರೈತರಿಗೆ ಬೀಜೋಪಚಾರ ಹಾಗೂ ಕೃಷಿ ಯಂತ್ರಗಳ ಬಳಕೆ ಕುರಿತು ಪ್ರಾತ್ಯಕ್ಷಿಕೆ ನೀಡಿದರು.

ರೈತರೊಂದಿಗೆ ನಡೆದ ಸಂವಾದದಲ್ಲಿ ಪಾಲ್ಗೊಂಡು, ಮಾತನಾಡಿದ ಕೊಪ್ಪಳ ಕೃಷಿ ವಿಜ್ಞಾನ ಕೇಂದ್ರದ, ಸಹಾಯಕ ಪ್ರಾಧ್ಯಾಪಕ ಡಾಕ್ಟರ ವಾಮನಮೂರ್ತಿ ಅವರು 'ಕೃಷಿ ವಿಜ್ಞಾನಿಗಳ ಸಲಹೆಯಂತೆ, ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ಬಳಸುವುದರಿಂದ, ಉತ್ತಮ ಇಳುವರಿ ಪಡೆಯಲು ಸಾಧ್ಯವಿದೆ' ಎಂದರು.

<><><>

ಬೆಳಗಾವಿಯ, ಮರಾಠಾ ಲಘು ಪದಾತಿ ದಳದ ಕೇಂದ್ರದಲ್ಲಿ, 31 ವಾರಗಳ ಕಾಲ, ಕಠಿಣ ಸೈನಿಕ ತರಬೇತಿ ಪಡೆದ, 659 ಅಗ್ನಿವೀರ ಸೈನಿಕರ ನಿರ್ಗಮನ ಪಥ ಸಂಚಲನ, ಮರಾಠಾ ಲೈಟ್ ಇನ್‌ಫಂಟ್ರಿ ಬಟಾಲಿಯನ್ ಮೈದಾನದಲ್ಲಿ ಜರುಗಿತು. ದಳದ ಕಮಾಂಡೆಂಟ್, ಬ್ರಿಗೇಡಿಯರ್ ಜಾಯ್‌ದೀಪ ಮುಖರ್ಜಿ, ಅಗ್ನಿವೀರರಿಂದ, ಗೌರವ ವಂದನೆ ಸ್ವೀಕರಿಸಿದರು.

<><><>

ವಿಜಯಪುರ ಜಿಲ್ಲೆ, ನಿಡಗುಂದಿ ತಾಲೂಕು, ಆಲಮಟ್ಟಿಯ, ಜಲ ವಿದ್ಯುದಾಗಾರದಲ್ಲಿ ವಿದ್ಯುತ್ ಉತ್ಪಾದನೆ ಆರಂಭವಾಗಿದೆ. 55 ಮೆಗಾ ವ್ಯಾಟ್ ಸಾಮರ್ಥ್ಯದ 5 ಘಟಕಗಳು ಹಾಗೂ 15 ಮೆಗಾ ವ್ಯಾಟ್ ಸಾಮರ್ಥ್ಯದ, ಒಂದು ಘಟಕ ಸೇರಿ, ಒಟ್ಟು 6 ಘಟಕಗಳಿಂದ, 290 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ ಎಂದು, ಕೆ.ಪಿ.ಸಿ.ಎಲ್. ಅಧೀಕ್ಷಕ ಅಭಿಯಂತರ ಚಂದ್ರಶೇಖರ ದೊರೆ, ತಿಳಿಸಿದ್ದಾರೆ.

<><><>

ರಾಯಚೂರು ಲೋಕಸಭಾ ಕ್ಷೇತ್ರ ವ್ಯಾಪ್ತಿಯ, ಹುಣಸಗಿ–ಯಾದಗಿರಿ ಮಧ್ಯೆ ರೇಲ್ವೆ ಸಂಪರ್ಕ ಯೋಜನೆಗೆ ಅಗತ್ಯವಿರುವ, ಸಮೀಕ್ಷಾ ಕಾರ್ಯವನ್ನು 90 ದಿನಗಳ ಒಳಗಾಗಿ ಪೂರ್ಣಗೊಳಿಸುವುದಾಗಿ ನೈಋತ್ಯ ರೈಲ್ವೆ ಮುಖ್ಯ ಆಡಳಿತ ಅಧಿಕಾರಿ ಅಜಯ ಶರ್ಮಾ ಹೇಳಿದರು. ಸಂಸದ ಜಿ.ಕುಮಾರ ನಾಯಕ, ಬೆಂಗಳೂರಿನಲ್ಲಿ ಶರ್ಮಾ ಅವರನ್ನು ಭೇಟಿ ಮಾಡಿ, ಹುಣಸಗಿ–ಯಾದಗಿರಿ ನಡುವೆ 162 ಕಿಲೋ ಮೀಟರ ರೈಲು ಮಾರ್ಗದ ಕಾಮಗಾರಿ ಸಮೀಕ್ಷೆ ಕಾರ್ಯ ಆರಂಭಿಸುವಂತೆ ಮನವಿ ಮಾಡಿದ್ದರು, ಇದಕ್ಕೆ ಪ್ರತಿಕ್ರಿಯಿಸಿರುವ ಅವರು, 90 ದಿನಗಳಲ್ಲಿ ಗುತ್ತಿಗೆ ಕರೆದು ಕಾಮಗಾರಿ ಆರಂಭಿಸುವುದಾಗಿ ಭರವಸೆ ನೀಡಿದ್ದಾರೆ.

<><><>

ಪರಿಸರ ಸಂರಕ್ಷಣೆ ಎಲ್ಲರ ಹೊಣೆ, ಪ್ಲಾಸ್ಟಿಕ್ ನಿರ್ಮೂಲನೆ ಮಾಡಿ, ಸ್ವಚ್ಛ ಪರಿಸರವನ್ನು ಕಾಪಿಡುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದು ಹಾಸನ ಜಿಲ್ಲಾ ಸತ್ರ ನ್ಯಾಯಾಧೀಶ ಹಿದಾಯತ್ ಉಲ್ಲಾ ಷರೀಫ್ ಹೇಳಿದರು. ಹಾಸನ ಜಿಲ್ಲಾಡಳಿತ ಸೇರಿದಂತೆ ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದಲ್ಲಿ, ಹಾಸನಾಂಬ ಕಲಾ ಕ್ಷೇತ್ರದಲ್ಲಿ ಆಯೋಜಿಸಲಾಗಿದ್ದ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪರಿಸರ ದಿನಾಚರಣೆ ಅಂಗವಾಗಿ ಮಕ್ಕಳಿಗಾಗಿ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>